**All India Radio: Bangalore**
**National Bulletin In Kannada**
**29.01.2026  19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**29.01.2026  19.35 hrs**
*******************

ಮುಖ್ಯಾಂಶಗಳು

೧. ನವದೆಹಲಿಯ ವಿಜಯ್ ಚೌಕ್‌ನಲ್ಲಿ ೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭ; ರಾಷ್ಟ್ರಪತಿ ಸೇರಿದಂತೆ ಹಲವು ಗಣ್ಯರು ಭಾಗಿ

೨. ಲೋಕಸಭೆಯಲ್ಲಿಂದು ಆರ್ಥಿಕ ಸಮೀಕ್ಷೆ ಪ್ರತಿ ಮಂಡಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್

೩. ವಿಶ್ವವಿದ್ಯಾಲಯ ಧನಸಹಾಯ ಆಯೋಗದ ನಿಯಮಾವಳಿ ೨೦೨೬ ಸ್ಥಗಿತಕ್ಕೆ ಸುಪ್ರೀಂ ಕೋರ್ಟ್ ಆದೇಶ

೪. ಕೆನಡಾ - ಭಾರತ ನಡುವೆ ಸುಸ್ಥಿರ ಕೈಗಾರಿಕಾ ಅಭಿವೃದ್ಧಿ  ಸಹಕಾರ ವರ್ಧನೆಗೆ ದ್ವಿಪಕ್ಷೀಯ ಮಾತುಕತೆ

೫. ಮಹಿಳೆಯರ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್; ಯುಪಿ ವಾರಿಯರ್ಸ್ ವಿರುದ್ಧ ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

***************

೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭ ನವದೆಹಲಿಯ ವಿಜಯ್ ಚೌಕ್‌ನಲ್ಲಿ ನಡೆಯಿತು. ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಕೇಂದ್ರ ಸಚಿವರು ಭಾಗವಹಿಸಿದ್ದರು.

ಸಶಸ್ತ್ರ ಪಡೆಗಳ ಬ್ಯಾಂಡ್‌ಗಳು ವಂದೇ ಮಾತರಂ, ಭಾರತ್ ಕೆ ಶಾನ್, ಆಯೆ ವತನ್, ಮತ್ತು ಸಾರೆ ಜಹಾನ್ ಸೆ ಅಚಾ ಮುಂತಾದ ದೇಶಭಕ್ತಿ ಗೀತೆಗಳನ್ನು ನುಡಿಸುವ ಮೂಲಕ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿದವು.

ಸಮಾರಂಭದಲ್ಲಿ ಆಪರೇಷನ್ ಸಿಂಧೂರ್‌ನ ಕಾರ್ಯಾಚರಣೆಯ ಸಮಯದಲ್ಲಿ ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗವನ್ನು ಗೌರವಿಸುವ ವಿಶೇಷ ರಚನೆಯನ್ನು ಭಾರತೀಯ ವಾಯುಪಡೆಯ ಬ್ಯಾಂಡ್ ಪ್ರಸ್ತುತಪಡಿಸಿತು. ಇದು ಭಾರತೀಯ ಭೂ ಸೇನೆ, ನೌಕಾಪಡೆ, ವಾಯುಪಡೆ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಬ್ಯಾಂಡ್‌ಗಳನ್ನು ಒಳಗೊಂಡಿತ್ತು.

ಸಮಾರಂಭವು ಸಾಮೂಹಿಕ ಬ್ಯಾಂಡ್‌ನ ಕದಮ್ ಕದಮ್ ಬಡಾಂಯೇ ಜಾ ಜೊತೆಗೆ ಪ್ರಾರಂಭವಾಯಿತು, ಬಗ್ಲರ್‌ಗಳು ನುಡಿಸಿದ 'ಸಾರೆ ಜಹಾನ್ ಸೇ ಅಚಾ' ಎಂಬ ಜನಪ್ರಿಯ ಗೀತೆಯೊಂದಿಗೆ ಕಾರ್ಯಕ್ರಮವು ಮುಕ್ತಾಯವಾಯಿತು.

***************

ಲೋಕಸಭೆಯಲ್ಲಿ ೨೦೨೫-೨೬ರ ಆರ್ಥಿಕ ಸಮೀಕ್ಷೆಯ ಪ್ರತಿಯನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಮಂಡಿಸಿದರು.

ಮುಖ್ಯ ಆರ್ಥಿಕ ಸಲಹೆಗಾರರ ಮಾರ್ಗದರ್ಶನದಲ್ಲಿ ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆಯು ಈ ದಾಖಲೆಯನ್ನು ಸಿದ್ಧಪಡಿಸಿದ್ದು, ಆರ್ಥಿಕ ಸಮೀಕ್ಷೆಯು ದೇಶದ ಪ್ರಸ್ತುತ ಆರ್ಥಿಕ ಸ್ಥಿತಿ ಮತ್ತು ಭವಿಷ್ಯದ ದೃಷ್ಟಿಕೋನದ ಸಮಗ್ರ ವಿಮರ್ಶೆಯಾಗಿದೆ.

ಮುಂದಿನ ತಿಂಗಳ ೧ ರಂದು ಕೇಂದ್ರ ಬಜೆಟ್ ೨೦೨೬-೨೭ ಮಂಡಿಸಲಾಗುವುದು. ಬಜೆಟ್ ಅಧಿವೇಶನದ ಮೊದಲ ಹಂತವು ಮುಂದಿನ ತಿಂಗಳು ೧೩ ರವರೆಗೆ ನಡೆಯಲಿದೆ. ಎರಡನೇ ಹಂತವು ಮಾರ್ಚ್ ೯ ರಿಂದ ಏಪ್ರಿಲ್ ೨ ರವರೆಗೆ ನಡೆಯಲಿದೆ. ಬಜೆಟ್ ಅಧಿವೇಶನದಲ್ಲಿ ೩೦ ಸಭೆಗಳು ನಡೆಯಲಿವೆ.

***************

ಆವರ್ತಕ ಕಾರ್ಮಿಕ ಬಲ ಸಮೀಕ್ಷೆ ಪ್ರಾರಂಭವಾದಾಗಿನಿಂದ ದೇಶದಲ್ಲಿ ಉದ್ಯೋಗ ಪರಿಸ್ಥಿತಿಗಳು ಸುಧಾರಿಸಿವೆ ಎಂದು ಮುಖ್ಯ ಆರ್ಥಿಕ ಸಲಹೆಗಾರ ವಿ. ಅನಂತ ನಾಗೇಶ್ವರನ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ೨೦೨೫-೨೬ರ ಆರ್ಥಿಕ ಸಮೀಕ್ಷೆಯ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ೨೦೨೩-೨೪ರಲ್ಲಿ ನಿರುದ್ಯೋಗ ದರವು ಶೇಕಡಾ ಆರರಿಂದ ಶೇಕಡಾ ೩.೨ಕ್ಕೆ ಇಳಿದಿದೆ. ಮಹಿಳಾ ಕಾರ್ಮಿಕ ಬಲದ ಭಾಗವಹಿಸುವಿಕೆ ಸುಮಾರು ಶೇಕಡಾ ೧೮ ರಷ್ಟು ಹೆಚ್ಚಾಗಿದೆ ಎಂದು ಅವರು ಹೇಳಿದರು.

ವರ್ಷದ ಮೊದಲ ಒಂಬತ್ತು ತಿಂಗಳಲ್ಲಿ ನಿರುದ್ಯೋಗ ದರವು ಕಳೆದ ತ್ರೈಮಾಸಿಕದಲ್ಲಿ ಶೇಕಡಾ ೫.೪ ರಿಂದ ಶೇಕಡಾ ೪.೯ ಕ್ಕೆ ಸ್ಥಿರವಾಗಿ ಕುಸಿದಿದೆ. ಜಾಗತಿಕ ಸನ್ನಿವೇಶದಲ್ಲಿ ಭಾರತವು ಆರ್ಥಿಕ ಕಾರ್ಯಕ್ಷಮತೆಯ ಓಯಸಿಸ್ ಎಂದು ಅವರು ಹೇಳಿದ್ದಾರೆ.

ಕೋವಿಡ್‌ಗೆ ಮುಂಚಿನ ನೈಜ ಜಿಡಿಪಿ ಬೆಳವಣಿಗೆ ಶೇ. ೬.೪ ರಷ್ಟಿತ್ತು ಮತ್ತು ೨೦೨೫ ರ ಆರ್ಥಿಕ ವರ್ಷದಲ್ಲಿ ಅದು ಶೇಕಡಾ ೬.೫ ರಷ್ಟಿತ್ತು ಮತ್ತು ಈ ವರ್ಷ ಅದು ಶೇಕಡಾ ೭.೪ ರಷ್ಟು ಇದೆ ಎಂದು ಅಂದಾಜಿಸಲಾಗಿದೆ.

ಒಟ್ಟು ಸ್ಥಿರ ಬಂಡವಾಳ ರಚನೆಯು ೨೦೨೫ರ ಆರ್ಥಿಕ ವರ್ಷಕ್ಕಿಂತ ಗಮನಾರ್ಹವಾಗಿ ಉತ್ತಮವಾಗಿ ಕಾರ್ಯನಿರ್ವಹಿಸುವ ನಿರೀಕ್ಷೆಯಿದೆ ಮತ್ತು ಬ್ಯಾಂಕಿಂಗ್ ಮತ್ತು ಕಾರ್ಪೊರೇಟ್ ಬ್ಯಾಲೆನ್ಸ್ ಶೀಟ್ ಒತ್ತಡದಿಂದಾಗಿ ೨೦೧೨-೨೦೨೦ ರ ಅವಧಿಗಿಂತ ಬೆಳವಣಿಗೆ ಕೇವಲ ವಾರ್ಷಿಕ ಶೇಕಡಾ ೬.೩ ರಷ್ಟಿದ್ದ ಇದು ತುಂಬಾ ಉತ್ತಮವಾಗಿದೆ ಎಂದು ಅನಂತ ನಾಗೇಶ್ವರನ್ ಹೇಳಿದರು.

ಗ್ರಾಮೀಣ ಅಭಿವೃದ್ಧಿಯಲ್ಲಿ, ಶೇಕಡಾ ೮೧ ರಷ್ಟು ಗ್ರಾಮೀಣ ಕುಟುಂಬಗಳು ಈಗ ಟ್ಯಾಪ್ ನೀರಿನ ಪ್ರವೇಶವನ್ನು ಹೊಂದಿವೆ, ೨ ಕೋಟಿ ೯೦ ಲಕ್ಷ ಮನೆಗಳನ್ನು ನಿರ್ಮಿಸಲಾಗಿದೆ ಮತ್ತು ಸ್ವಾಮಿತ್ವ ಯೋಜನೆಯಡಿಯಲ್ಲಿ ೨ ಕೋಟಿ ೭೬ ಲಕ್ಷ ಆಸ್ತಿ ಕಾರ್ಡ್‌ಗಳನ್ನು ನೀಡಲಾಗಿದೆ ಎಂದು ಅನಂತ ನಾಗೇಶ್ವರನ್ ತಿಳಿಸಿದ್ದಾರೆ.

ಆರೋಗ್ಯ ರಕ್ಷಣೆಯ ವಿಷಯಕ್ಕೆ ಬಂದಾಗ, ೧೪ ಕೋಟಿ ೩೦ ಲಕ್ಷ ಫಲಾನುಭವಿಗಳನ್ನು **U-WIN** ಪೋರ್ಟಲ್‌ನಲ್ಲಿ ನೋಂದಾಯಿಸಲಾಗಿದೆ, ೪೨ ಕೋಟಿ ೮೦ ಲಕ್ಷ ಆಯುಷ್ಮಾನ್ ಭಾರತ್ ಕಾರ್ಡ್‌ಗಳನ್ನು ನೀಡಲಾಗಿದೆ ಮತ್ತು ೧ ಲಕ್ಷ ೮೦ ಸಾವಿರಕ್ಕೂ ಹೆಚ್ಚು ಆಯುಷ್ಮಾನ್ ಆರೋಗ್ಯ ಮಂದಿರಗಳು ಕಾರ್ಯನಿರ್ವಹಿಸುತ್ತಿವೆ ಎಂದು ನಾಗೇಶ್ವರನ್ ಹೇಳಿದರು.

***************

ವಿಶ್ವವಿದ್ಯಾಲಯ ಧನಸಹಾಯ ಆಯೋಗದ ನಿಯಮಾವಳಿ ೨೦೨೬ ಅನ್ನು ಸ್ಥಗಿತಗೊಳಿಸುವಂತೆ ಸುಪ್ರೀಂ ಕೋರ್ಟ್ ಇಂದು ಆದೇಶಿಸಿದೆ.

ಸಾಮಾನ್ಯ ವರ್ಗದ ಬಗ್ಗೆ ತಾರತಮ್ಯವೆಂದು ಪ್ರಶ್ನಿಸಲಾಗುತ್ತಿರುವ ನಿಯಮಾವಳಿ ಬಗ್ಗೆ ನ್ಯಾಯಾಲಯವು ಕೆಲವು ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದೆ. ಪ್ರಖ್ಯಾತ ನ್ಯಾಯಶಾಸ್ತ್ರಜ್ಞರನ್ನು ಒಳಗೊಂಡ ಸಮಿತಿಯು ನಿಯಮಗಳನ್ನು ಮರುಪರಿಶೀಲಿಸಬೇಕು ಎಂದು ನ್ಯಾಯಾಲಯ ಸೂಚಿಸಿದೆ. ನಿಯಮಗಳು ಪ್ರಾಥಮಿಕವಾಗಿ ಅಸ್ಪಷ್ಟವಾಗಿವೆ ಮತ್ತು ದುರುಪಯೋಗಪಡಿಸಿಕೊಳ್ಳುವ ಸಾಧ್ಯತೆ ಹೊಂದಿವೆ ಎಂದು ನ್ಯಾಯಾಲಯ ತಿಳಿಸಿದೆ

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು ೨೦೨೬ರ ನಿಯಮಗಳ ಸಾಂವಿಧಾನಿಕತೆಯನ್ನು ಪ್ರಶ್ನಿಸುವ ಮೂರು ರಿಟ್ ಅರ್ಜಿಗಳ ವಿಚಾರಣೆ ನಡೆಸಿತು. ನ್ಯಾಯಾಲಯವು ಅರ್ಜಿಗಳ ಕುರಿತು ಕೇಂದ್ರ ಮತ್ತು ವಿಶ್ವವಿದ್ಯಾಲಯ ಧನಸಹಾಯ ಆಯೋಗಕ್ಕೆ ನೋಟಿಸ್ ನೀಡಿದ್ದು, ಮಾರ್ಚ್ ೧೯ ರಂದು ಉತ್ತರ ನೀಡಬಹುದು. ಅಲ್ಲಿಯವರೆಗೆ, ೨೦೨೬ ರ ನಿಯಮಾವಳಿಯನ್ನು ಸ್ಥಗಿತಗೊಳಿಸಲಾಗಿದೆ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

***************

ಪರಸ್ಪರ ಅಭಿವೃದ್ಧಿ ಮತ್ತು ಸಮೃದ್ಧಿಗಾಗಿ ಭಾರತ-ಕೆನಡಾ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಕುರಿತು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ನವದೆಹಲಿಯಲ್ಲಿ ಇಂದು ಕೆನಡಾದ ಇಂಧನ ಮತ್ತು ನೈಸರ್ಗಿಕ ಸಂಪನ್ಮೂಲ ಸಚಿವ ಟಿಮ್ ಹಾಡ್ಗ್ಸನ್ ಅವರ ಭೇಟಿಯ ಸಂದರ್ಭದಲ್ಲಿ, ಎರಡೂ ಕಡೆಯವರು ಇಂಧನ ಭದ್ರತೆ, ನಿರ್ಣಾಯಕ ಖನಿಜಗಳು ಮತ್ತು ನವೀಕರಿಸಬಹುದಾದ ಇಂಧನದ ಕುರಿತು ಚರ್ಚಿಸಿದರು.

***************

ಅಪರೂಪದ ನಿರ್ಣಾಯಕ ಖನಿಜಗಳು, ಇವಿ ಚಲನಶೀಲತೆ, ಉತ್ಪಾದನೆ ಮತ್ತು ಸುಸ್ಥಿರ ಕೈಗಾರಿಕಾ ಅಭಿವೃದ್ಧಿ ಕ್ಷೇತ್ರಗಳಲ್ಲಿನ ಸಹಕಾರವನ್ನು ಬಲಪಡಿಸಲು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಕೆನಡಾದ ನೈಸರ್ಗಿಕ ಸಂಪನ್ಮೂಲಗಳ ಖಾತೆ ಸಚಿವ ಟಿಮ್ ಹಾಡ್ಗಸನ್ ನೇತೃತ್ವದ ಉನ್ನತ ಮಟ್ಟದ ನಿಯೋಗದೊಂದಿಗೆ ಮಹತ್ವದ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ನವದೆಹಲಿಯ ಉದ್ಯೋಗ ಭವನದಲ್ಲಿ ನಡೆದ ದ್ವಿಪಕ್ಷೀಯ ಸಭೆಯಲ್ಲಿ ಉಭಯ ಸಚಿವರು, ಎರಡೂ ದೇಶಗಳ ನಡುವಿನ ಕೈಗಾರಿಕಾ ಕ್ಷೇತ್ರದಲ್ಲಿ ಸಹಕಾರಗಳ ಬಗ್ಗೆ ಪರಸ್ಪರ ಚರ್ಚಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಕಾರ್ಯತಂತ್ರದ ಭಾಗವಾಗಿ ಹಲವಾರು ಕ್ಷೇತ್ರಗಳಲ್ಲಿ ಸುಸ್ಥಿರ ಬೆಳವಣಿಗೆ, ತಾಂತ್ರಿಕ ನಾಯಕತ್ವ ಮತ್ತು ಸ್ವಾವಲಂಬನೆಗೆ ಒತ್ತು ನೀಡುವ ಬಗ್ಗೆ ಕುಮಾರಸ್ವಾಮಿ ಅವರು ಕೆನಡದ ಸಚಿವರೊಂದಿಗೆ ಮಾತುಕತೆ ನಡೆಸಿದರು.

"ಜಗತ್ತಿನ ಪ್ರಮುಖ ಆಟೋಮೊಬೈಲ್ ತಯಾರಕ ದೇಶಗಳಲ್ಲಿ ಮುಂಚೂಣಿಯಲ್ಲಿರುವ ಭಾರತವು ಫೇಮ್-೨ ಯೋಜನೆಯ ಮೂಲಕ ಇವಿ ವಾಹನಗಳನ್ನು ತ್ವರಿತವಾಗಿ ಅಳವಡಿಸಿಕೊಂಡಿದೆ. ಈ ಯೋಜನೆ ಮೂಲಕ ೧೬ ಲಕ್ಷಕ್ಕೂ ಹೆಚ್ಚು ಇವಿ ವಾಹನಗಳು ರಸ್ತೆಗೆ ಇಳಿಯುವಂತೆ ಮಾಡಿತು ಮತ್ತು ದೇಶಾದ್ಯಂತ ೧೦ ಸಾವಿರದ ೯೦೦ಕ್ಕೂ ಹೆಚ್ಚು ಸಾರ್ವಜನಿಕ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಸಹಕಾರಿ ಆಯಿತು" ಎಂದು ಕುಮಾರಸ್ವಾಮಿ ಅವರು ಕೆನಡಾ ಸಚಿವರಿಗೆ ಮಾಹಿತಿ ನೀಡಿದರು.

***************

ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಅಂತ್ಯಕ್ರಿಯೆಯನ್ನು ಇಂದು ಬಾರಾಮತಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಸಲಾಯಿತು.

ಕೇಂದ್ರ ಸಚಿವರಾದ ಅಮಿತ್ ಶಾ ಮತ್ತು ನಿತಿನ್ ಗಡ್ಕರಿ, ರಾಜ್ಯ ಸಚಿವ ಮುರಳೀಧರ್ ಮೊಹೋಲ್, ರಕ್ಷಾ ಖಡ್ಸೆ, ರಾಮದಾಸ್ ಅಠಾವಳೆ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ, ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

***************

ನಿನ್ನೆ ಬಾರಾಮತಿ ಬಳಿ ಅಪಘಾತಕ್ಕೀಡಾಗಿ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ನಾಲ್ವರು ವ್ಯಕ್ತಿಗಳು ಸಾವನ್ನಪ್ಪಿದ ಖಾಸಗಿ ವಿಮಾನದ ಬ್ಲಾಕ್ ಬಾಕ್ಸ್ ವಶಪಡಿಸಿಕೊಳ್ಳಲಾಗಿದೆ ಮತ್ತು ತನಿಖೆ ತ್ವರಿತವಾಗಿ ಪ್ರಗತಿಯಲ್ಲಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ಇಂದು ತಿಳಿಸಿದೆ.

***************

ಪಟ್ಟಿ ಮಾಡಲಾದ ಕಾರ್ಯಸೂಚಿಗಳ ಮೇಲೆ ಅರ್ಥಪೂರ್ಣವಾಗಿ ಚರ್ಚೆ ನಡೆಯಲು ಮೇಲ್ಮನೆಗೆ ಅವಕಾಶ ಕಲ್ಪಿಸುವುದಕ್ಕಾಗಿ, ಸದೃಢ ಸಂಸತ್ತೀಯ ಮೇಲ್ವಿಚಾರಣೆ ನಡೆಸುವಲ್ಲಿ ಹಾಗೂ ಅತ್ಯುನ್ನತ ಸಂಸತ್ತೀಯ ಶಿಸ್ತು ಮತ್ತು ಗೌರವವನ್ನು ಕಾಪಾಡುವಲ್ಲಿ ಸದಸ್ಯರು ತಮ್ಮ ಕೊಡುಗೆ ನೀಡುವಂತೆ ರಾಜ್ಯಸಭಾಧ್ಯಕ್ಷ ಸಿ.ಪಿ. ರಾಧಾಕೃಷ್ಣನ್ ಮನವಿ ಮಾಡಿದ್ದಾರೆ.

ರಾಜ್ಯಸಭಾ ಅಧಿವೇಶನದ ಶೂನ್ಯವೇಳೆ ವೇಳೆ ತಮ್ಮ ಆರಂಭಿಕ ಭಾಷಣದಲ್ಲಿ ಅವರು, ವಿಭಿನ್ನ ಅಭಿಪ್ರಾಯಗಳು ಮತ್ತು ಉತ್ಸಾಹಭರಿತ ಚರ್ಚೆಗಳ ಮೂಲಕವೇ ದೇಶದ ಪ್ರಜಾಸತ್ತಾತ್ಮಕ ವ್ಯವಸ್ಥೆ ವೃದ್ಧಿಯಾಗುತ್ತದೆ ಎಂದು ಹೇಳಿದ್ದಾರೆ.

***************

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳೆಯರ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್‌ನ ೧೮ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******ಮುಕ್ತಾಯ*******